# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 116 | Pages. 2 | Date: 09-04-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 116 – ಪುಟಗಳು : 2 | 09-04-2026 | ಗುರುವಾರ | Ph: 8762954248 | ದರ : ₹1

# 72 ರಾಷ್ಟ್ರಗಳಿಗೆ ಭಾರತ ಆರ್ಥಿಕ ನೆರವು


## ಸಂಸದ ಕೋಟ ಶ್ರೀನಿವಾಸ ಪೂಜಾರಿ | ದೀನ್ ದಯಾಳ ಉಪಾಧ್ಯಾಯ ಪ್ರಶಿಕ್ಷಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಉತ್ತಮ ಕೆಲಸ ಮಾಡುತ್ತಿದ್ದು, ವಿಶ್ವದ 72 ರಾಷ್ಟ್ರಗಳಿಗೆ ಆರ್ಥಿಕ ನೆರವು ನೀಡುವ ಮಟ್ಟಿಗೆ ಬೆಳೆದಿದೆ ಎಂದು ಉಡುಪಿ–ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಅವರು ಸಲಹೆ ನೀಡಿದರು.

ತಾಲ್ಲೂಕಿನ ಹಾನುಬಾಳ್ ಹೋಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ಬುಧವಾರ ಹಮ್ಮಿಕೊಂಡಿದ್ದ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಾರ್ಯಕರ್ತರ 'ಪಂಡಿತ್ ದೀನ್ ದಯಾಳ ಉಪಾಧ್ಯಾಯ ಪ್ರಶಿಕ್ಷಣ ವರ್ಗ'ದಲ್ಲಿ ಮಾತನಾಡಿದರು.

2014ರ ಪೂರ್ವದ ಹಾಗೂ ಇಂದಿನ ಭಾರತಕ್ಕೆ ವ್ಯತ್ಯಾಸವಿದೆ. ಒಂದು ಕಾಲದಲ್ಲಿ ಭಾರತವನ್ನು ಬಡತನ ಮತ್ತು ಹಿಂದುಳಿದ ಆರ್ಥಿಕತೆಯ ದೇಶವೆಂದು ನೋಡಲಾಗುತ್ತಿತ್ತು. ಆದರೆ ಈಗ ದೇಶವು ಜಾಗತಿಕ



ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಂಡಿದೆ. ಸುಮಾರು 72ಕ್ಕೂ ಹೆಚ್ಚು ರಾಷ್ಟ್ರಗಳಿಗೆ ಆರ್ಥಿಕ ನೆರವು ನೀಡುವಷ್ಟು ಶಕ್ತಿಯುತವಾಗಿ ಬೆಳೆದಿದೆ ಎಂದರು.

ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳು ಬಡವರು, ರೈತರು ಹಾಗೂ ಮಧ್ಯಮ ವರ್ಗದವರ ಬದುಕು ಸುಧಾರಿಸಲು ನೆರವಾಗಿವೆ. ರಾಜ್ಯ ಸರ್ಕಾರವು ಕೇಂದ್ರದ ಈ ಯೋಜನೆಗಳನ್ನು ತನ್ನದೇ ಸಾಧನೆ ಎಂದು ಬಿಂಬಿಸಿಕೊಳ್ಳುತ್ತಿರುವುದು ವಿಷಾದನೀಯ ಎಂದು ಟೀಕಿಸಿದರು.

ಕಾರ್ಯಕರ್ತರು ಪಕ್ಷದ ತತ್ವ ಹಾಗೂ ಸಿದ್ಧಾಂತಗಳನ್ನು ಜನರಿಗೆ ತಲುಪಿಸುವಲ್ಲಿ ಹೆಚ್ಚು ಸಕ್ರಿಯರಾಗಬೇಕು. ತರಬೇತಿ ವರ್ಗಗಳ ಮೂಲಕ ಸಂಘಟನಾ ಸಾಮರ್ಥ್ಯ ಹೆಚ್ಚಿಸಿಕೊಳ್ಳಬೇಕೆಂದು ಕರೆ ನೀಡಿದರು.


ಶಾಸಕ ಸಿಮೆಂಟ್ ಮಂಜು ಮಾತನಾಡಿ, ಸಾಮಾನ್ಯ ಕಾರ್ಯಕರ್ತನು ಉನ್ನತ ಮಟ್ಟಕ್ಕೆ ಬೆಳೆಯುವುದು ಬಿಜೆಪಿಯಲ್ಲಿ ಮಾತ್ರ ಸಾಧ್ಯ. ಇತರ ಪಕ್ಷಗಳಲ್ಲಿ ಮುಂದಿನ ಅಧ್ಯಕ್ಷರು ಯಾರಾಗುತ್ತಾರೆಂದು ಮೊದಲೇ ಹೇಳಬಹುದು. ಆದರೆ ಬಿಜೆಪಿಯಲ್ಲಿ ಕಾರ್ಯಕರ್ತರ ಶ್ರಮಕ್ಕೆ ಮನ್ನಣೆ ಇರುವುದರಿಂದ ಯಾರೂ ಬೇಕಾದರೂ ಉನ್ನತ ಜವಾಬ್ದಾರಿ ಪಡೆಯಬಹುದು. ರಾಷ್ಟ್ರೀಯವಾದದ ಸಿದ್ಧಾಂತದಡಿ ಕಾರ್ಯನಿರ್ವಹಿಸುವ ಬಿಜೆಪಿ ಟಿಕುಟುಂಬಕ್ಕಿಂತ ದೇಶ ಮೊದಲುಟಿ ಎಂಬ ತತ್ವವನ್ನು ನಂಬಿದೆ. ನನ್ನಂತಹ ಸಾಮಾನ್ಯ ಕಾರ್ಯಕರ್ತನನ್ನು ಶಾಸಕನನ್ನಾಗಿ ಮಾಡುವ ಮೂಲಕ ಪಕ್ಷವು ಪ್ರಾಮಾಣಿಕ ದುಡಿಮೆಗೆ ಗೌರವ ನೀಡಿದೆ. ಈ ಅಭ್ಯಾಸ ವರ್ಗವನ್ನು ಸದುಪಯೋಗಪಡಿಸಿಕೊಂಡು ಕ್ಷೇತ್ರದಲ್ಲಿ ಪಕ್ಷವನ್ನು ಮತ್ತಷ್ಟು ಬಲಿಷ್ಟಗೊಳಿಸಬೇಕೆಂದು ಮನವಿ ಮಾಡಿದರು.

ಎರಡು ದಿನಗಳ ಕಾಲ ನಡೆದ ಈ ಶಿಬಿರದಲ್ಲಿ ಕಾರ್ಯಕರ್ತರಿಗೆ ಸಂಘಟನಾ ಕೌಶಲ, ರಾಜಕೀಯ ಜಾಗೃತಿ ಮತ್ತು ಸಾರ್ವಜನಿಕ ಸಂಪರ್ಕದ ಬಗ್ಗೆ ತರಬೇತಿ ನೀಡಲಾಯಿತು.

ಮಾಜಿ ಸಚಿವ ಅಪ್ಪಚ್ಚು ರಂಜನ್, ಮಾಜಿ ವಿಧಾನ ಪರಿಷತ್ ಸದಸ್ಯ ಗಣೇಶ್ ಕಾರ್ತಿಕ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮುಖಂಡರಾದ ಪುಣ್ಯಪಾಲ್, ಕ್ಯಾಮನಹಳ್ಳಿ ರಾಜ್ ಕುಮಾರ್, ನೇತ್ರಾ ಮಂಜುನಾಥ್, ವಳಲಹಳ್ಳಿ ಅಶ್ವತ್, ಉಮಾ ರವಿಪ್ರಕಾಶ್, ಸೋಮಶೇಖರ್, ಮಧು ಬೊಮ್ಮನಕೆರೆ, ಅಬ್ಬನ ಕೃಷ್ಣ ಹಾಗೂ ಇತರರಿದ್ದರು.

> **ಬಿಜೆಪಿ ಕಾರ್ಯಕರ್ತರು ಹೋರಾಟದ ಮನೋಭಾವ ಬೆಳೆಸಿಕೊಳ್ಳಬೇಕು. ರಾಷ್ಟ್ರ ಹಿತಕ್ಕಾಗಿ ದುಡಿಯುತ್ತಿರುವ ಪಕ್ಷ ನಮ್ಮದಾಗಿದ್ದು ಇಲ್ಲಿ ಸದಸ್ಯತ್ವ ಪಡೆದಿರುವುದು ಹೆಮ್ಮೆಯ ವಿಚಾರ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶ ಅಭಿವೃದ್ಧಿಯತ್ತ ದಾಪುಗಾಲಿಡುತ್ತಿದೆ.**
>
> **– ಕೋಟ ಶ್ರೀನಿವಾಸ ಪೂಜಾರಿ, ಸಂಸದ**

# ಚಿಕ್ಕಕಡಲೂರಿನಲ್ಲಿ ಆತಂಕ ಸೃಷ್ಟಿಸಿದ ಮುಸುಕುಧಾರಿ ಕಳ್ಳರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ಚಿಕ್ಕಕಡಲೂರು ಗ್ರಾಮದಲ್ಲಿ ಮುಸುಕು ಧರಿಸಿ ಮನೆಗೆ ನುಗ್ಗಿದ ಕಳ್ಳರು 1 ಕೆ.ಜಿ. ಬೆಳ್ಳಿ ಆಭರಣ ಹಾಗೂ 15 ಸಾವಿರ ರೂ. ನಗದು ಕಳವು ಮಾಡಲಾಗಿದ್ದು ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದೆ.

ಗ್ರಾಮದ ಪ್ರಸಾದ್ ಎಂಬುವವರಿಗೆ ಸೇರಿದ ತೋಟದ ಮನೆಯಲ್ಲಿ ಕಳ್ಳತನ ನಡೆದಿದೆ. ಹಾಸನದಲ್ಲೇ ವಾಸವಿರುವ ಕುಟುಂಬಸ್ಥರು ವಾರದಲ್ಲಿ ಎರಡು ಬಾರಿ ಮಾತ್ರ ಗ್ರಾಮದ ನಿವಾಸದಲ್ಲಿರುತ್ತಾರೆ. ಅದನ್ನೇ ಬಂಡವಾಳ ಮಾಡಿಕೊಂಡ ಕಳ್ಳರು ಕೃತ್ಯ ಸಾಧಿಸಿದ್ದಾರೆ.

ಕಪ್ಪು ಬಣ್ಣದ ಬಟ್ಟೆ ಹಾಕಿ ಮಾಸ್ಕ್ ಧರಿಸಿ ಕೈಯಲ್ಲಿ ಟಾರ್ಚ್ ಹಿಡಿದು ಬಂದಿರುವ ಐವರು ಚೋರರು ಕಬ್ಬಿಣದ ರಾಡ್‌ನಿಂದ ಮನೆಯ ಡೋರ್ ಮೀಟಿ ನಂತರ ಒಳನುಗ್ಗಿದ್ದಾರೆ. ಐವರಲ್ಲಿ ಯಾರಾದರೂ ಬಂದಾರು ಎಂದು ನೋಡಿಕೊಳ್ಳಲು ಇಬ್ಬರು ಗೇಟಿನ ಹೊರಗೆ ನಿಂತಿದ್ದರೆ ಉಳಿದ ಮೂವರು ಒಳಗೆ ಪ್ರವೇಶಿಸಿ ರೂಂನಲ್ಲಿದ್ದ ಲಾಕರ್ ಮುರಿದು ನಗದು, ಬೆಳ್ಳಿ ವಸ್ತುಗಳನ್ನು ಕಳ್ಳತನ ಮಾಡಿದ್ದಾರೆ.

ಕಳ್ಳತನ ಮಾಡುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸುದ್ದಿ ತಿಳಿದು ಗ್ರಾಮಕ್ಕೆ ಭೇಟಿ ನೀಡಿದ ದುದ್ದ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ. ಶ್ವಾನದಳ, ಬೆರಳಚ್ಚು ತಜ್ಞರೂ ಸಹ ಭೇಟಿ ನೀಡಿ ಪೂರಕ ಸಾಕ್ಷ್ಯಾಧಾರ ಸಂಗ್ರಹಿಸಿದರು.

### ಹೋಟೆಲ್‌ನಲ್ಲಿ ಹಣ ಕಳವು



ಮತ್ತೊಂದು ಪ್ರಕರಣದಲ್ಲಿ ಐಸ್ ಕ್ರೀಂ ಖರೀದಿಸುವ ನೆಪದಲ್ಲಿ ಹೋಟೆಲ್‌ಗೆ ಬಂದ ಯುವಕನೊಬ್ಬ ಸಮಯ ನೋಡಿಕೊಂಡು ಕ್ಯಾಶ್ ಕೌಂಟರ್‌ನಲ್ಲಿದ್ದ ಹಣವನ್ನು ದೋಚಿರುವ ಘಟನೆ ನಗರದ ಕೆಹೆಚ್‌ಬಿ ಬಡಾವಣೆಯ ಚಾಮುಂಡಿ ಹೋಟೆಲ್‌ನಲ್ಲಿ ನಡೆದಿದೆ.

ಹೋಟೆಲ್‌ಗೆ ಬಂದ ಅನಾಮಿಕ ಐಸ್ ಕ್ರೀಂ ಕೇಳಿದ್ದಾನೆ. ಐಸ್ ಕ್ರೀಂ ಇಲ್ಲವೆಂದು ಹೋಟೆಲ್‌ನವರು ಇಲ್ಲವೆಂದು ಹೇಳಿದಾಗ ಎಲ್ಲಿ ಸಿಗುತ್ತದೆಂದು ಕೇಳಿದ್ದಾನೆ. ಅವರು ಬೇರೆ ಅಂಗಡಿಯ ಮಾರ್ಗ ತೋರಿಸುತ್ತಿದ್ದಂತೆ ಆ ಕಡೆಗೆ ಹೋದಂತೆ ನಟಿಸಿದ ಯುವಕ ಪುನ: ಹೋಟೆಲ್‌ಗೆ ಬಂದು ಕುಳಿತಿದ್ದಾನೆ. ಸಾರ್ವಜನಿಕರು ಇಲ್ಲದಿರುವುದು ಹಾಗು ಮಾಲೀಕರು ಒಳಗೆ ಇರುವುದನ್ನು ಖಚಿತಪಡಿಸಿಕೊಂಡ ಆತ ಕ್ಯಾಶ್ ಕೌಂಟರ್‌ಗೆ ಬಂದು ಅಲ್ಲಿದ್ದ ಹಣವನ್ನೆಲ್ಲಾ ಕದ್ದು ತನ್ನ ಕೆಲಸ ಮುಗಿಯುತ್ತಿದ್ದಂತೆ ಅಲ್ಲಿಂದ ಮಾಯವಾಗಿದ್ದಾನೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಸ್ತೆ ಅಪಘಾತ ತಡೆಗೆ ಕ್ರಮ ವಹಿಸಲು ಜಿಲ್ಲಾಧಿಕಾರಿ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ರಸ್ತೆ ಅಪಘಾತಗಳ ತಡೆಗೆ ಸೂಕ್ತ ಕ್ರಮವಹಿಸಿ ಮರಣ ಪ್ರಮಾಣ ಕಡಿಮೆ ಮಾಡುವುದರ ಮೂಲಕ ಜನರ ಜೀವ ಉಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ವಿಡಿಯೋ ಸಂವಾದದ ಮೂಲಕ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ರಸ್ತೆ ಅಪಘಾತಗಳು ಸಂಭವಿಸುತ್ತಿವ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಅಪಘಾತ ತಡೆಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರಲ್ಲದೆ,



ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸುವ ಮೂಲಕ ರಸ್ತೆ ಅಪಘಾತಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಸೂಚಿಸಿದರು. ಸಮಾಜದ ಒಳಿತಿಗಾಗಿ ಪ್ರಾಮಾಣಿಕ ಪ್ರಯತ್ನವಿರಬೇಕು. ಈ ನಿಟ್ಟಿನಲ್ಲಿ ಟಿಗೋಲ್ಡನ್ ಅವರ್ ಅನುಷ್ಠಾನಕ್ಕೆ ಹೆಚ್ಚು ಒತ್ತು ನೀಡಬೇಕು. ಪಾದಚಾರಿಗಳು ಓಡಾಡಲು ತೊಂದರೆ ಆಗದಂತೆ ಫುಟ್ ಪಾತ್ ಒತ್ತುವರಿಯಾಗಿದ್ದಲ್ಲಿ ಅದನ್ನು ತೆರವುಗೊಳಿಸಲು ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ರಸ್ತೆ ಒತ್ತುವರಿ ಆಗಿರುವುದನ್ನು ಗುರುತಿಸಿ ತೆರವಿಗೆ ನಿಗಾ ವಹಿಸಬೇಕು ಎಂದು ಹೇಳಿದರು.

ರಸ್ತೆ ಅಪಘಾತಗಳನ್ನು ತಪ್ಪಿಸಲು ನ್ಯೂನ್ಯತೆಗಳನ್ನು ಗುರುತಿಸಿ ಸರಿಪಡಿಸುವ ಮೂಲಕ ರಸ್ತೆ ಸುರಕ್ಷತೆ ಬಲಪಡಿಸಬೇಕು ಈ ಹಿನ್ನೆಲೆಯಲ್ಲಿ ವಾರಕ್ಕೆ ಒಮ್ಮೆ ಸಭೆ ನಡೆಸಿ ಚರ್ಚಿಸಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸೈನೇಜ್ ಬೋರ್ಡ್, ಎಚ್ಚರಿಕೆ ಸೂಚನಾ ಫಲಕ ಅಳವಡಿಸುವುದು, ಬೀದಿ ದೀಪ ಅಳವಡಿಸುವುದು, ನಾಯಿಗಳ ಹಾವಳಿ ತಡೆಯಲು ಕ್ರಮ, ವೈಜ್ಞಾನಿಕವಾಗಿ ಹಂಪ್ಸ್ ಅಳವಡಿಸುವ ಮೂಲಕ ರಸ್ತೆ ಸುರಕ್ಷತೆಗೆ ಪ್ರಾಮುಖ್ಯತೆ ನೀಡಬೇಕು ಎಂದ ತಿಳಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಟ್ರಾಕ್ಟರ್ ಹಾಗೂ ಎತ್ತಿನ ಗಾಡಿಗಳಿಗೆ ರಿಫ್ಲೆಕ್ಟರ್ ಅಳವಡಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಹಸಿರು ಹಾಸನಟಿ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಈ ನಿಟ್ಟಿನಲ್ಲಿ ಸಂಚಾರಕ್ಕೆ ತೊಂದರೆ ಆಗದಂತೆ ಗಿಡಗಳನ್ನು ನೆಟ್ಟು ಬೆಳೆಸಲು ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ವಿಡಿಯೋ ಸಂವಾದದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಅಂಬೇಡ್ಕರ್ ಜಯಂತಿ ಯಶಸ್ಸಿಗೆ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ತಾಲ್ಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ಬುಧವಾರ ಪೂರ್ವಭಾವಿ ಸಭೆ ನಡೆಯಿತು.

ಏ. 14ರಂದು ಬೆಳಿಗ್ಗೆ 10 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭಾವಚಿತ್ರದೊಂದಿಗೆ ವೀರಗಾಸೆ, ನಾಸಿಕ್ ಡೋಲ್ ಹಾಗೂ ಕಹಳೆ ವಾದ್ಯಗೋಷ್ಠಿಗಳೊಂದಿಗೆ ಅದ್ದೂರಿ ಮೆರವಣಿಗೆ ನಡೆಸಲು ನಿರ್ಧರಿಸಲಾಯಿತು. ಬಳಿಕ ಅಂಬೇಡ್ಕರ್ ಸಮುದಾಯ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಸಲು



ತೀರ್ಮಾನ ಕೈಗೊಳ್ಳಲಾಯಿತು.

ವೇದಿಕೆ ಕಾರ್ಯಕ್ರಮದಲ್ಲಿ 2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಗೌರವಿಸಲಾಗುವುದು. ಅದರೊಂದಿಗೆ ಯುಪಿಎಸ್‌ಸಿ ಪರೀಕ್ಷೆಯಲ್ಲಿ 389ನೇ ರ್‍ಯಾಂಕ್ ಗಳಿಸಿ ತಾಲ್ಲೂಕಿಗೆ ಕೀರ್ತಿ ತಂದ ಗುರ್ಜನಹಳ್ಳಿ ಗ್ರಾಮದ ಮನೋಜ್ ಕುಮಾರ್ ಅವರನ್ನು ಸನ್ಮಾನಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಪೂರ್ವಭಾವಿ ಸಭೆಗೆ ಗೈರಾದ ತಾಲ್ಲೂಕು ಮಟ್ಟದ ಅಧಿಕಾರಿಗಳ ವಿರುದ್ಧ ದಲಿತ ಸಮುದಾಯದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು. ಸಂವಿಧಾನ ಅರ್ಪಿಸಿದ ಮಹನೀಯರ ಜಯಂತಿಯ ಸಭೆಗೆ ಬಾರದಿರುವುದು ಸರಿಯಲ್ಲವೆಂದು ಆಕ್ಷೇಪಿಸಿದ ಅವರು, ಅಂತಹ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿದರು.

ತಹಶೀಲ್ದಾರ್ ಸುಪ್ರೀತಾ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಗಂಗಾಧರ್, ತಹಸಿಲ್ದಾರ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಮೋಹನ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಾಶ್, ಸಬ್ ಇನ್ಸಪೆಕ್ಟರ್ ಮಹೇಶ್, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಮಹೇಶ್ ಇತರರಿದ್ದರು.

# ವಾಹನ ಚಲಾಯಿಸುವಾಗ ನಿಯಮ ಪಾಲನೆ ಕಡ್ಡಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಇತ್ತೀಚಿನ ದಿನಗಳಲ್ಲಿ ರಸ್ತೆ ಅಪಘಾತಗಳು ಹೆಚ್ಚುತ್ತಿರುವುದಕ್ಕೆ ಚಾಲಕರ ನಿರ್ಲಕ್ಷ್ಯ ಮತ್ತು ಏಕಾಗ್ರತೆಯ ಕೊರತೆಯೇ ಕಾರಣ ಎಂದು ಸಾರಿಗೆ ಇಲಾಖೆ ಸಕಲೇಶಪುರ ಮೋಟಾರು ವಾಹನ ನಿರೀಕ್ಷಕ ಆಲಿಯುದ್ದೀನ್ ಹೇಳಿದರು.


ಪಟ್ಟಣದ ಜೂನಿಯರ್ ಕಾಲೇಜು ಮೈದಾನದಲ್ಲಿ ಲಯನ್ಸ್ ಸಂಸ್ಥೆಯಿಂದ ಬುಧವಾರ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಆಯೋಜಿಸಿದ್ದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಪಘಾತಗಳಿಗೆ ರಸ್ತೆ, ವಾಹನ ಮತ್ತು ಚಾಲಕ ಎಂಬ ಮೂರು ಅಂಶಗಳು ಕಾರಣವಾಗುತ್ತವೆ. ಶೇ. 99 ರಷ್ಟು




ಅಪಘಾತಗಳು ಚಾಲಕರ ತಪ್ಪಿನಿಂದಲೇ ಸಂಭವಿಸುತ್ತವೆ. ರಸ್ತೆ ದೋಷ ಅಥವಾ ವಾಹನದ ತಾಂತ್ರಿಕ ಸಮಸ್ಯೆಗಳು ಕಡಿಮೆ ಪ್ರಮಾಣದಲ್ಲಿ ಕಾರಣವಾಗುತ್ತವೆ. ಚಾಲಕರು ವಾಹನಗಳನ್ನು ಚಾಲನೆ ಮಾಡುವಾಗ ಮೊಬೈಲ್ ಬಳಕೆ, ನಿಯಮ ಉಲ್ಲಂಘನೆ ಹಾಗೂ ಬೇಜವಾಬ್ದಾರಿತನದಿಂದ ಅಪಘಾತಗಳು ಹೆಚ್ಚುತ್ತಿವೆ. ವಾಹನ ಚಲಾಯಿಸುವಾಗ ಮೊಬೈಲ್ ಬಳಸುವುದು ಕಾನೂನು ಬಾಹಿರವಾಗಿದ್ದು, ಶಿಕ್ಷಾರ್ಹ ಅಪರಾಧ. ಅಲ್ಲದೆ ರಸ್ತೆ ಸುರಕ್ಷತೆಗೆ ಶಿಸ್ತು, ತಾಳ್ಮೆ ಮತ್ತು ನಿಯಮ ಪಾಲನೆ ಅತ್ಯಗತ್ಯವಾಗಿದ್ದು, ರಸ್ತೆ ಸೂಚನಾ ಫಲಕಗಳನ್ನು ಗಮನಿಸಿ ಚಾಲನೆ ಮಾಡಬೇಕು ಎಂದರು.

ಲಯನ್ಸ್ ಸಂಸ್ಥೆ ಅಧ್ಯಕ್ಷೆ ತಾರಾಮಣಿ ಸುರೇಶ್ ಮಾತನಾಡಿ, ರಸ್ತೆ ಸುರಕ್ಷತೆಯನ್ನು ಸಮಾಜದ ಮಹತ್ವದ ಸಾಮಾಜಿಕ ಆರೋಗ್ಯ ಎಂದು ಬಣ್ಣಿಸಿದರು. ನನ್ನ ವಾಹನ, ನನ್ನ ಇಷ್ಟ ಎಂಬ ಮನೋಭಾವ ಬಿಟ್ಟು, ನಮ್ಮ ತಪ್ಪಿನಿಂದ ಇತರರಿಗೆ ಅಪಾಯವಾಗಬಾರದು ಎಂಬ ಜವಾಬ್ದಾರಿ ಎಲ್ಲರಲ್ಲೂ ಇರಬೇಕು. ಜತೆಗೆ ಪೋಷಕರ ಜವಾಬ್ದಾರಿ ಅರಿತು 18 ವರ್ಷ ಪೂರ್ಣಗೊಳ್ಳುವ ಮೊದಲೇ ಮಕ್ಕಳಿಗೆ ವಾಹನ ಚಾಲನೆ ಮಾಡಲು ಅವಕಾಶ ನೀಡಬಾರದು. ಚಾಲನಾ ಪರವಾನಗಿ ಪಡೆದ ನಂತರ ಮಾತ್ರ ವಾಹನ ಬಳಸಲು ಅವಕಾಶ ನೀಡಬೇಕು ಹಾಗೂ ಬೈಕ್ ಚಾಲನೆ ಸಂದರ್ಭ ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಬೇಕು ಎಂದರು.

# ಆನ್‌ಲೈನ್ ಗೇಮ್, ಬೆಟ್ಟಿಂಗ್‌ನಿಂದ ಮಾರಕ ಪರಿಣಾಮ




ಹಳೇಬೀಡು: ಆನ್‌ಲೈನ್ ಬೆಟ್ಟಿಂಗ್ ಹಾಗೂ ಗೇಮ್‌ನಲ್ಲಿ ವಿದ್ಯಾರ್ಥಿಗಳು ಸಹ ತೊಡಗಿಕೊಂಡು ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಜೂಜಾಟ ಹಾಗೂ ಬೆಟ್ಟಿಂಗ್‌ಗೆ ಬಲಿಯಾದ ವ್ಯಕ್ತಿ ಸಮತೋಲನದಲ್ಲಿರಲು ಸಾಧ್ಯವಿಲ್ಲ ಎಂದು ಮಾನಸಿಕ ತಜ್ಞ ಡಾ. ಜೆ. ಕಾರ್ತಿಕ್ ಹೇಳಿದರು.

ಹಳೇಬೀಡಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಯುವ ರೆಡ್ ಕ್ರಾಸ್ ಘಟಕ, ಐಕ್ಯೂಎಸಿ, ಎನ್ ಎಸ್‌ಎಸ್, ರೋವರ್ಸ್ ರೆಂಜರ್ಸ್ ಘಟಕ, ಭಾರತೀಯ ರೆಡ್ ಕ್ರಾಸ್ ಬೇಲೂರು ಘಟಕ ಹಾಗೂ ಬೇಲೂರು ರೋಟರಿ ಸಂಸ್ಥೆ ಸಹಯೋಗದಲ್ಲಿ ನಡೆದ ವಿಶ್ವ ಆರೋಗ್ಯ ದಿನಾಚರಣೆ ಹಾಗೂ ಮಾದಕ ವ್ಯಸನ ಮುಕ್ತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶರವೇಗದಲ್ಲಿ ಬೆಳೆಯುತ್ತಿರುವ ಆನ್ ಲೈನ್ ಬೆಟ್ಟಿಂಗ್‌ನಿಂದ ಜನರ ನೆಮ್ಮದಿ ಹಾಳಾಗುತ್ತಿದೆ. ಸೋಲು, ಗೆಲುವಿನ ಏರಿಳಿತದಿಂದ ಮಾನಸಿಕ ಸಮಸ್ಯೆಗೆ ಜನರು ಬಲಿಯಾಗುತ್ತಿದ್ದಾರೆ.

ಜೂಜಾಟ, ಬೆಟ್ಟಿಂಗ್ ಮೊದಲು ಮನರಂಜನೆಗಾಗಿ ಶುರುವಾಗುತ್ತದೆ. ನಂತರ ಚಟವಾಗಿ ಪರಿಣಮಿಸುತ್ತದೆ. ಆಡದೆ ಇದ್ದರೆ ಕೋಪ ಬರುತ್ತದೆ. ಯಾರೊಂದಿಗೂ ಪ್ರೀತಿ ವಿಶ್ವಾಸದಿಂದ ಇರಲು ಸಾಧ್ಯವಾಗದೆ ಮಾನಸಿಕ ತೊಳಲಾಟಕ್ಕೆ ಬಲಿಯಾಗಿ ಜೀವನ ಹಾಳಾಗುತ್ತದೆ. ಬೆಟ್ಟಿಂಗ್, ಜೂಜಾಟದಿಂದ ದೂರವಿದ್ದು, ಉತ್ತಮ ಹವ್ಯಾಸ ರೂಢಿಸಿಕೊಂಡವರು ಆರೋಗ್ಯವಂತರಾಗಿ ನೆಮ್ಮದಿಯ ಜೀವನ ಸಾಗಿಸಬಹುದು ಎಂದು ಕಾರ್ತಿಕ್ ಹೇಳಿದರು.

ಬೇಲೂರು ರೋಟರಿ ಕ್ಲಬ್ ಅಧ್ಯಕ್ಷ ಬಿ.ಎಂ.ರಂಗನಾಥ್ ಮಾತನಾಡಿ, ಶಾಲಾ ಕಾಲೇಜು ಬಳಿ ಗಾಂಜಾ, ಅಫೀಮು ಡ್ರಗ್ಸ್ ಮಾರಾಟವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ವಿದ್ಯಾರ್ಥಿಗಳು ಚಟಗಳಿಗೆ ಬಲಿಯಾಗದಂತೆ ಎಚ್ಚರ ವಹಿಸಬೇಕಾಗಿದೆ ಎಂದರು.

ಭಾರತೀಯ ರೆಡ್ ಕ್ರಾಸ್ ಜಿಲ್ಲಾ ಸಭಾಪತಿ ಎಚ್.ಪಿ.ಮೋಹನ್ ಮಾತನಾಡಿ, ರೆಡ್ ಕ್ರಾಸ್ ಪರೀಕ್ಷೆಯಲ್ಲಿ ಬೇಲೂರು ರೆಡ್ ಕ್ರಾಸ್ ಘಟಕ ಪ್ರಥಮ ಸ್ಥಾನದಲ್ಲಿದೆ. ರಕ್ತದಾನ ಹಾಗೂ ಆರೋಗ್ಯ, ಅರಿವು ಕಾರ್ಯಕ್ರಮದಲ್ಲಿಯೂ ಮುಂಚೂಣಿಯಲ್ಲಿದೆ ಎಂದರು.

ಪ್ರಗತಿಪರ ರೈತ ಎಸ್.ಎನ್. ಯೋಗೀಶಪ್ಪ ಮಾತನಾಡಿ, ಕೀಟ, ಕ್ರಿಮಿ ಕಳೆನಾಶಕ ಬಳಕೆಯಿಂದ ಆಹಾರ ವಿಷಕಾರಿಯಾಗುತ್ತಿದೆ. ರಾಸಾಯನಿಕ ಬಳಸದೆ ತರಕಾರಿ ಗೆಡ್ಡೆ ಗೆಣಸುಗಳನ್ನು ಮನೆಯಲ್ಲಿಯೆ ಕುಂಡದಲ್ಲಿ ಬೆಳೆದು ಆರೋಗ್ಯಕರ ಸೇವಿಸಬಹುದು ಎಂದು ಸಲಹೆ ಮಾಡಿದರು.

ರೆಡ್ ಕ್ರಾಸ್, ರೋವರ್ಸ್ ರೆಂಜರ್ಸ್, ಎನ್.ಎಸ್.ಎಸ್, ಎನ್.ಸಿ.ಸಿಯಲ್ಲಿ ಸೇವೆ ಸಲ್ಲಿಸಿರುವ ನಿವೃತ್ತ ಪ್ರಾಂಶುಪಾಲ ಜಿ.ಡಿ.ನಾರಾಯಣ್ ಅವರನ್ನು ಅಭಿನಂದಿಸಿದರು.

ಪ್ರಾಂಶುಪಾಲ ಡಾ. ಬಿ.ಕೆ. ಶ್ರೀನಿವಾಸ್ ಅಧ್ಯಕ್ಷತೆ ವಹಿಸಿದ್ದರು.


ಪತ್ರಕರ್ತರಾದ ಬಿ.ಆರ್. ಉದಯ್ ಕುಮಾರ್, ಎಚ್.ಎಸ್. ಅನಿಲ್ ಕುಮಾರ್, ಹಿರಿಯ ಶ್ರೇಣಿ ಗ್ರಂಥಪಾಲಕ ಡಾ.ಮನೋಜ್ ಕುಮಾರ್, ಸಹಾಯಕ ಪ್ರಾಧ್ಯಾಪಕರಾದ ಶಿವರಾಜ್ ಕುಮಾರ್, ಡಾ.ತಿಮ್ಮಾನಾಯ್ಕ ಇತರರಿದ್ದರು.

# ಕಾನೂನು ಅರಿವು ಮತ್ತು ನೆರವು ಘಟಕ ಕಾರ್ಯಕ್ರಮ ಯಶಸ್ವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಎಂ.ಕೃಷ್ಣ ಕಾನೂನು ಮಹಾವಿದ್ಯಾಲಯದ ಕಾನೂನು ಅರಿವು ಘಟಕ ಹಾಗೂ ಸೆಂಟ್ರಲ್‌ಕಾಮರ್ಸ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಇಂದು ಸೆಂಟ್ರಲ್ ಕಾಮರ್ಸ್ ಪಿ.ಯು ಕಾಲೇಜು ಸಭಾಂಗಣದಲ್ಲಿ ಕಾನೂನು ಅರಿವು ಮತ್ತು ನೆರವು ಘಟಕ ಕಾರ್ಯಕ್ರಮವು ಅಂತ್ಯಂತ ಯಶಸ್ವಿಯಾಗಿ ಜರುಗಿತು, ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಅರ್ಥಪೂಣವಾಗಿ ಉದ್ಘಾಟಿಸಿದ ಗಣ್ಯರು ವಿದ್ಯಾರ್ಥಿಗಳಲ್ಲಿ ಕಾನೂನು ಪ್ರಜ್ಞೆಯ ಅಗತ್ಯತೆಯನ್ನು ಸಾರಿದರು.

ಸೆಂಟ್ರಲ್ ಕಾಮರ್ಸ್ ಕಾಲೇಜಿನ ಸಂಸ್ಥಾಪಕರಾದ ಶ್ರೀಯುತ ಮಹೇಶ್‌ರವರು ಕಾರ್ಯಕ್ರಮನ್ನು ಉದ್ಘಾಟನೆ ಮಾಡಿ ಮಾತನಾಡಿ ವಿದ್ಯಾರ್ಥಿ ದೆಸೆಯಲ್ಲಿಯೆ ಕಾನೂನಿನ ಮೂಲಭೂತ ಅರಿವು ಇರುವುದು ಅತ್ಯಂತ ಅವಶ್ಯಕ ಇದು ಸಮಾಜದಲ್ಲಿ ಜವಾಬ್ದಾರಿಯುತ ಪ್ರಜೆಗಳಾಗಿ ಬದುಕಲು ಸಹಾಕಾರಿಯಾಗುತ್ತದೆ ಮತ್ತು ಪ್ರತಿಯೊಬ್ಬರು ಹಕ್ಕುಗಳ ಜೊತೆಗೆ ಕರ್ತವ್ಯಗಳನ್ನು ಸಹ ನಿರ್ವಹಿಸಬೇಕಾಗುತ್ತದೆ ಎಂದು ಆಶಯ ವ್ಯಕ್ತಪಡಿಸಿದರು.



ದ್ವಿತಿಯ ವರ್ಷದ ಕಾನೂನು ವಿದ್ಯಾರ್ಥಿನಿ ಕು॥ ಸಿಂತು ಅವರು ಮಾತನಾಡುತ್ತ ಬಾಲ ನ್ಯಾಯ ಕಾಯಿದೆ 2015ರ ಅಡಿಯಲ್ಲಿ ಮಕ್ಕಳ ರಕ್ಷಣೆ ಮತ್ತು ಪಾಲನೆಗೆ ಇರುವ ಅವಕಾಶಗಳನ್ನು ಪ್ರತಿಯೊಬ್ಬರು ಅರಿಯಬೇಕು ಮಕ್ಕಳಿಗೆ ಸುರಕ್ಷಿತ ಪರಿಸರ ಕಲ್ಪಿಸುವುದು ಸಮಾಜದ ಕರ್ತವ್ಯ ಎಂದರು ಮತ್ತು ಪೋಕ್ಸೋ ಕಾಯಿದೆಯ ಬಗ್ಗೆ ವಿವರಣೆ ನೀಡಿ ಲೈಂಗಿಕ ಅಪರಾಧಗಳಿಂದ ಮಕ್ಕಳನ್ನು ರಕ್ಷಿಸಲು ಇರುವ ಕಟ್ಟುನಿಟ್ಟಾದ ಕಾನೂನುಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಇರಬೇಕು ದೌರ್ಜನ್ಯ ನಡೆದಾಗ ಮೌನ ವಹಿಸದೆ ಕಾನೂನಿನ ನೆರವನ್ನು ಪಡೆಯಬೇಕೆಂದು ಕಿವಿಮಾತು ಹೇಳಿದರು, ನಂತರ ದ್ವಿತೀಯ ವರ್ಷದ ವಿದ್ಯಾರ್ಥಿ ಶ್ರೀ ಶಿವಕುಮಾರ್ ಬಿ ಎಸ್ ಅವರು ಮಾತನಾಡಿ ಬಾಲ ಕಾರ್ಮಿಕ ಪದ್ಧತಿ ಸಮಾಜಕ್ಕೆ ಅಂಟಿದ ಶಾಪವಾಗಿದ್ದು ಇವುಗಳನ್ನು ತಡೆಗಟ್ಟಲು ಕಾನೂನು ಎಷ್ಟು ಬಲಿಷ್ಟವಾಗಿದೆಯೋ ಅಷ್ಟೇ ಸಾರ್ವಜನಿಕರ ಸಹಕಾರವು ಮುಖ್ಯವಾಗಿದೆ, ಎಲ್ಲಾ ಮನೆಗಳ ಪರಿಸ್ಥಿತಿಯು ಒಂದೇ ರೀತಿಯಲ್ಲಿ ಇರುವುದಿಲ್ಲ ಹಾಗಂತ 14 ವರ್ಷಗಳಿಗಿಂತ ಕೆಳಗಿನ ಮಕ್ಕಳನ್ನು ಕೆಲಸಕ್ಕೆ ಕಳುಹಿಸುವುದು ಕಾನೂನಿನ ಪ್ರಕಾರ ಅಪರಾಧ ಹಾಗೂ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆಯಲ್ಲ ಇದರಿಂದ ಪರ್ತಿಯೊಬ್ಬರು ಜಾಗ್ರತರಾಗಬೇಕು ಎಂದು ತಿಳಿಸಿದರು, ನಂತರ ವಿದ್ಯಾರ್ಥಿನಿ ಕು॥ ಸಿಂಧು ಬಿ ಆರ್‌ಅವರು ಬಾಲ್ಯವಿವಾಹದ ನಿಷೇಧ 2006 ಕಾಯ್ದೇಯ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಪರಿಮಳರವರು ವಹಿಸಿದ್ದರು, ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ಶಿವಕುಮಾರ್ ಕೆ ಎನ್ ರವರು ನಿರೂಪಿಸಿದರು, ಸ್ನೇಹ ಬಿ ಆರ್ ರವರು ಕಾರ್ಯಕ್ರಮಕ್ಕೆ ಅತಿಥಿಗಳನ್ನು ಸ್ವಾಗತಿಸಿ ನಂತರ ವಂದಿಸಿದರು. ಕಾಲೇಜು ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಬೋಧಕ ವರ್ಗದವರು ಉಪಸ್ಥಿತರಿದ್ದು ಕಾನೂನು ಮಾಹಿತಿಯನ್ನು ಪಡೆದುಕೊಂಡರು.

# ಪ್ರೌಢ ಶಾಲಾ ಶಿಕ್ಷಕರಿಗೆ ಡಬಲ್ ಟ್ರಬಲ್


## ಹೆಚ್ಚಿದ ಕಾರ್ಯದೊತ್ತಡ | ಪರೀಕ್ಷಾ ಮೌಲ್ಯಮಾಪನ ಜೊತೆಗೆ ಜನಗಣತಿ ತಲೆನೋವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಸ್‌ಎಸ್‌ಎಲ್‌ಸಿ ಪರೀಕ್ಷಾ ಮೌಲ್ಯಮಾಪನ ಹಾಗೂ ಜನಗಣತಿ ಒಟ್ಟಿಗೆ ನಡೆಸಬೇಕಿರುವ ಸಂದಿಗ್ಧತೆಗೆ ಪ್ರೌಢ ಶಾಲಾ ಶಿಕ್ಷಕರು ಸಿಲುಕಿದ್ದು ಸರ್ಕಾರದ ಕಾರ್ಯಭಾರ ತಲೆನೋವು ತರಿಸಿದೆ.

ಪರೀಕ್ಷೆ ಮುಗಿದ ಬೆನ್ನಲ್ಲೇ ಅಂದರೆ ಏ. 24ರ ಒಳಗೆ ಫಲಿತಾಂಶ ಪ್ರಕಟಿಸುವ ಉಮೇದಿನಲ್ಲಿ ರಾಜ್ಯ ಸರ್ಕಾರ ಇದೆ. ಆದರೆ ಕೇಂದ್ರ ಸರ್ಕಾರ ಜನಗಣತಿ ಪ್ರಕ್ರಿಯೆ ಪ್ರಾರಂಭಿಸಿರುವುದರಿಂದ ಆ ಹೊರೆಯೂ ಶಿಕ್ಷಕರ ಹೆಗಲೇರಿದೆ. ಹೀಗಾಗಿ ಪರೀಕ್ಷಾ ಮೌಲ್ಯಮಾಪನ ವಿಳಂಬವಾಗುವುದರ ಜೊತೆಗೆ ಫಲಿತಾಂಶ ನಿಗದಿತ ಅವಧಿಯೊಳಗೆ ಪ್ರಕಟವಾಗುವುದು ಅಸಾಧ್ಯ ಎನ್ನಲಾಗಿದೆ.

ಪರೀಕ್ಷಾ ಮೌಲ್ಯ ಮಾಪನವನ್ನು ಏ.15 ರೊಳಗೆ ಪೂರ್ಣಗೊಳಿಸಬೇಕು ಎಂಬ ಆದೇಶ ಇದೆ. ಈಗ ಮೌಲ್ಯಮಾಪನ ರಾಜ್ಯದ ಹಲವು ಭಾಗಗಳಲ್ಲಿ ನಡೆಯುತ್ತಿದೆ. ಈಗ



ಇದೇ ಅವಧಿಯಲ್ಲಿ ಅಂದರೆ ಏ.7 ಮತ್ತು 8ರಂದು ಜನಗಣತಿ ತರಬೇತಿಗೂ ಕೆಲವು ಶಿಕ್ಷಕರನ್ನು ನಿಯೋಜಿಸಲಾಗಿದೆ. ರಾಜ್ಯದಲ್ಲಿ 70 ಸಾವಿರ ಶಿಕ್ಷಕರು ಮೌಲ್ಯಮಾಪನ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದು, ಜಿಲ್ಲೆಯಲ್ಲಿ 1800 ಶಿಕ್ಷಕರಿದ್ದಾರೆ. ಇದೇ ಅವಧಿಯಲ್ಲಿ ಜನಗಣತಿ ತರಬೇತಿಯೂ ನಡೆಯಲಿದೆ. ಇದರಿಂದ ಶಿಕ್ಷಕರ ಮೇಲೆ ಕೆಲಸದ ಒತ್ತಡ ಹೆಚ್ಚಾಗಿದೆ. ಒಂದೇ ದಿನದಲ್ಲಿ ಹೆಚ್ಚು ಪೇಪರ್‌ಗಳನ್ನು ತಿದ್ದುಪಡಿ ಮಾಡಲು ಸೂಚನೆ ನೀಡಲಾಗಿದೆ.

ರಾಜ್ಯದಲ್ಲಿ ಜನಗಣತಿ ತರಬೇತಿ ಯೋಜನೆ ಏ.10 ರಿಂದ 15ರೊಳಗೆ ಒಟ್ಟು ಮೂರು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತದಲ್ಲಿ 1,000 ರೂ., ಎರಡನೇ ಹಂತದಲ್ಲಿ 3,000 ರೂ. ಹಾಗೂ ಮೂರನೇ ಹಂತದಲ್ಲಿ 4,000 ರೂ. ಭತ್ಯೆ ನೀಡಲಾಗುತ್ತದೆ. ಜನಗಣತಿ ತರಬೇತಿಯನ್ನು ಏ. 15ರೊಳಗೆ ಮುಗಿಸಬೇಕೆಂಬ ಆದೇಶವಿದೆ. ಮೊದಲ ಹಂತದ ತರಬೇತಿ ನಡೆಯುತ್ತಿದ್ದು ಏ. 8ಕ್ಕೆ ಕೊನೆಗೊಳ್ಳಲಿದೆ. ಎರಡನೇ ಹಂತದ ಹಾಗು ಮೂರನೇ ಹಂತದ ತರಬೇತಿಗೆ ನಿಯೋಜನೆಗೊಂಡಿರುವ ಶಿಕ್ಷಕರೇ ಮೌಲ್ಯಮಾಪನಕ್ಕೂ ನಿಯೋಜನೆಗೊಂಡಿರುವುದರಿಂದ ಸಮಸ್ಯೆಯಾಗಿದೆ.

ರಾಜ್ಯ ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಸಬೇಕಿದೆ. ಪರೀಕ್ಷಾ ಮೌಲ್ಯಮಾಪನಕ್ಕೆ ಬೇಕಾದಷ್ಟು ಸಮಯ ನೀಡಬೇಕು. ಮೌಲ್ಯಮಾಪನ ಮತ್ತು ಜನಗಣತಿ ತರಬೇತಿ ದಿನಾಂಕಗಳನ್ನು ಬದಲಾಯಿಸಬೇಕು. ಎಸ್‌ಎಸ್‌ಎಲ್‌ಸಿ ಉತ್ತರ ಪತ್ರಿಕೆ ಮೌಲ್ಯಮಾಪನಕ್ಕೆ ನಿಯೋಜಿಸುವ ಶಿಕ್ಷಕರನ್ನು ಜನಗಣತಿ ಕೆಲಸದಿಂದ ಕೈಬಿಡಬೇಕೆಂಬ ಒತ್ತಾಯ ಕೇಳಿಬಂದಿದೆ.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಜೀವನದಲ್ಲಿ ಮಹತ್ವದ ಘಟ್ಟ. ಆದ್ದರಿಂದ ಪರೀಕ್ಷಾ ಮೌಲ್ಯಮಾಪನ ಅತ್ಯಂತ ಜವಾಬ್ದಾರಿಯುತ ಪ್ರಕ್ರಿಯೆಯಾಗಿದೆ. ಇನ್ನು ಜನಗಣತಿ ರಾಷ್ಟ್ರ ಮಟ್ಟದ ಕಾರ್ಯಕ್ರಮ. ಇದರ ತರಬೇತಿಗೆ ಗೈರಾಗಲು ಸಾಧ್ಯವಿಲ್ಲ. ಈ ಎರಡರಲ್ಲಿ ಯಾವುದಕ್ಕೆ ಗೈರಾದರೂ ಕ್ರಿಮಿನಲ್ ಪ್ರಕರಣ ಎದುರಿಸುವ ಭೀತಿ ಶಿಕ್ಷಕರದ್ದಾಗಿದೆ. ಸೂಕ್ತ ಯೋಜನೆ, ಸಮನ್ವಯ ಕೊರತೆಯಿಂದ ಉಂಟಾದ ಈ ದ್ವಂದ್ವ ನಿಲುವು ಶಿಕ್ಷಕರ ಮೇಲೆ ಅನಗತ್ಯ ಒತ್ತಡ ಹೇರಿದೆ.

### ಉಪನ್ಯಾಸಕರಿಗೂ ಹೊರೆ

ಜನಗಣತಿ ಪ್ರಕ್ರಿಯೆಗೆ ಪ್ರಾಥಮಿಕ, ಪ್ರೌಢ ಶಾಲಾ ಶಿಕ್ಷಕರು ಮಾತ್ರವಲ್ಲದೆ ಪದವಿ ಕಾಲೇಜುಗಳ ಉಪನ್ಯಾಸಕರನ್ನು ನಿಯೋಜಿಸಿದ್ದು ಅವರೂ ತೊಂದರೆ ಅನುಭವಿಸುತ್ತಿದ್ದಾರೆ. ಈಗ ಕಿರು ಪರೀಕ್ಷೆ ನಡೆಸುವ ಸಮಯ. ಜನಗಣತಿ ತರಬೇತಿಗೆ ಕಡ್ಡಾಯವಾಗಿ ಹಾಜರಾಗಬೇಕೆಂದು ಸರ್ಕಾರ ಆದೇಶಿಸಿರುವುದರಿಂದ ವಿದ್ಯಾರ್ಥಿಗಳ ಕಲಿಕೆ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಆತಂಕ ಹೆಚ್ಚಾಗಿದೆ.

# ಗಣಿಗಾರಿಕೆಗೆ ಅನುಮತಿ ನೀಡಲು ಪ್ರತಿಭಟನೆ: ಸ್ವಾಮೀಜಿ ಭಾಗಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭೋವಿ ಜನಾಂಗದ ಕುಲಸುಬಿಗೆ ಅಡ್ಡಿಪಡಿಸಿರುವುದು ಖಂಡನೀಯ ಎಂದು ಬಾಗಲಕೋಟೆ-ಚಿತ್ರದುಗ ಮಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಆಕ್ಷೇಪ ವ್ಯಕ್ತಪಡಿಸಿದರು.

ಆಲೂರು ತಾಲ್ಲೂಕಿನ ಜಯಂತಿ ನಗರ, ಕಾರಗೋಡು, ವೈ.ಎನ್.ಪುರ ಬಳಿ ಕಲ್ಲು ಗಣಿಗಾರಿಕೆ ನಿಷೇಧಿಸಿ ಜಿಲ್ಲಾಡಳಿತ ಆದೇಶಿಸಿರುವುದನ್ನು ವಿರೋಧಿಸಿ ಸಮಾಜದವರು ನಡೆಸುತ್ತಿರುವ 8ನೇ ದಿನ ಅನಿರ್ದಿಷ್ಟಾವಧಿ ಧರಣಿಯಲ್ಲಿ ಮಾತನಾಡಿದ ಅವರು, ಸೈಜುಗಲ್ಲು ಒಡೆದು ಬದುಕು ಕಟ್ಟಿಕೊಂಡಿರುವವರ ವಿರುದ್ಧ ದ್ವೇಷ ಸಾಧಿಸುವುದು ಸರಿಯಲ್ಲ. ಪೂರ್ವಿಕರ ಕಾಲದಿಂದಲೂ ಈ ವೃತ್ತಿಯನ್ನೇ ಸಮಾಜದವರು ನಂಬಿದ್ದಾರೆ. ಯಾರದೋ ಮಾತು ಕೇಳಿ ಜಿಲ್ಲಾಡಳಿತ ಗಣಿಗಾರಿಕೆ ಸ್ಥಗಿತಗೊಳಿಸಿರುವುದು ಖಂಡನೀಯ ಎಂದರು.

ಸುಮಾರು 250 ರಿಂದ 300 ಮಂದಿ ಮಗ್ಗೆ ಗ್ರಾಮದ ಸರ್ವೆ ನಂ. 151ರ ಸರ್ಕಾರಿ ಗೋಮಾಳದ 3 ಎಕರೆ ಪ್ರದೇಶದಲ್ಲಿ ಗಣಿಗಾರಿಕೆ ನಡೆಸುತ್ತಿದ್ದರು. ಇದು ಅವರ ಪಾರಂಪರಿಕ ಕುಲಕಸುಬಾಗಿದೆ. ಮಕ್ಕಳ ಶಿಕ್ಷಣ, ಆರೋಗ್ಯ ಸೇರಿ ದಿನನಿತ್ಯದ ಬದುಕು ಇದೇ ಉದ್ಯೋಗದ ಮೇಲೆ ಅವಲಂಬಿತವಾಗಿದೆ. ಇವರಲ್ಲಿ ಬಹುತೇಕರಿಗೆ ಸ್ವಂತ ಕೃಷಿ ಭೂಮಿಯಿಲ್ಲದೆ ಸಂಪೂರ್ಣವಾಗಿ ಈ ಕೆಲಸದ ಮೇಲೆಯೇ ಅವಲಂಬಿತರಾಗಿದ್ದಾರೆ ಎಂದು ಹೇಳಿದರು.

ಸುಳ್ಳು ಆರೋಪ ಮೂಲಕ ಗಣಿಗಾರಿಕೆಗೆ ಅಡ್ಡಿಪಡಿಸುತ್ತಿರುವುದು ತಿಳಿದು ಬಂದಿದೆ. ತಾತ್ಕಾಲಿಕ ನಿಷೇಧ ಹೇರಿರುವುದು ಕಾರ್ಮಿಕರಲ್ಲಿ ಆತಂಕ ಮೂಡಿಸಿದೆ. ಈಗಾಗಲೇ ತನಿಖೆ ನಡೆಸಿ ಯಾವುದೇ ತಪ್ಪಿಲ್ಲವೆಂದು ದೃಢಪಟ್ಟಿರುವ ಕಾರಣ ಮತ್ತೆ ವರದಿ ಕೇಳದೆ ಗಣಿಗಾರಿಕೆ ಮತ್ತೆ ಆರಂಭಿಸಬೇಕೆಂದು ಒತ್ತಾಯಿಸಿದರು.

ಭೋವಿ ಸಂಘದ ರಾಜ್ಯಾಧ್ಯಕ್ಷ ಹೆಚ್.ಮಂಜೇಶ್, ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಸೇತುರಾಮು, ಲತಾ, ಕಲ್ಲು ಕುಟಕರ ಸಂಘದ ಮಹದೇವ್, ನಂದೀಶ್, ಆರ್ಮುಗ, ಸರೋಜ, ಅಂಬಿಕಾ ಇದ್ದರು.

# ಅರಸೀಕೆರೆ ಅಭಿವೃದ್ಧಿಯ ಮಾಹಿತಿ ನೀಡಲು ಬಿಜೆಪಿ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಮ್ಮ ಅಧಿಕಾರಾವಧಿಯಲ್ಲಿ ನಗರ ಅಭಿವೃದ್ಧಿಯಾಗಿದೆ ಎನ್ನುವ ನಗರಸಭೆ ಮಾಜಿ ಅಧ್ಯಕ್ಷ ಕೆ.ಎಂ.ಸಮೀವುಲ್ಲಾ ಗೆ ಕಮಿಷನ್ ಆಸೆಗಾಗಿ ಹಾಳು ಮಾಡಿದ್ದೇ ಹೆಚ್ಚು. ಅವರ ಕಾಲದಲ್ಲಿ ಅಭಿವೃದ್ಧಿ ಶೂನ್ಯವೆಂದು ಬಿಜೆಪಿ ಮುಖಂಡ ಕೆಂಪುಸಾಗರ ಶಿವರಾಜ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಸಮೀವುಲ್ಲಾ ಅವರು ಏನಾದರೂ ಒಳ್ಳೆಯ ಕೆಲಸ ಮಾಡಿದ್ದರೆ ದಾಖಲೆ ಸಮೇತ ಬಹಿರಂಗಪಡಿಸಬೇಕು. 2018ರಲ್ಲಿ ನಗರಸಭೆಗೆ ಖರೀದಿಸಲಾದ ಕಾಂಪ್ಯಾಕ್ಟರ್ ವಾಹನದ ವಿಚಾರದಲ್ಲಿ ನಡೆದ ನಿರ್ಲಕ್ಷ್ಯ, ಆಡಳಿತ ವೈಫಲ್ಯ ಮತ್ತು ಕಮಿಷನ್ ರಾಜಕಾರಣದಿಂದ ನಗರಸಭೆಗೆ 33.95 ಲಕ್ಷ ರೂ.. ನಷ್ಟವುಂಟಾಗಿದೆ ಎಂದರು.

ಅಂದಿನ ನಗರಸಭೆ ಅಧ್ಯಕ್ಷರು, ಆಯುಕ್ತರು ಹಾಗೂ ಅಧಿಕಾರಿಗಳ ವೈಫಲ್ಯದಿಂದ ಈ ಅವ್ಯವಸ್ಥೆ ಉಂಟಾಗಿ 8 ಅಧಿಕಾರಿಗಳಿಗೆ ಅಮಾನತು ಭೀತಿ ಎದುರಾಗಿತ್ತು. ಈ ಹಗರಣ ಬಹಿರಂಗಪಡಿಸಲು ಬಿಜೆಪಿ ನಗರ ಘಟಕ ನಿರಂತರ ಹೋರಾಟ ನಡೆಸಿತು ಎಂದರು.

ನಗರಸಭೆ ಅಧಿಕಾರಿಗಳು ಹಾಗೂ ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕ ಸಾಧಿಸಿದ ಪ್ರಯತ್ನದ ಫಲವಾಗಿ ಕಳೆದ ಮಾ.11 ರಂದು ಕಾಂಪ್ಯಾಕ್ಟರ್ ವಾಹನಕ್ಕೆ ನೋಂದಣಿ ಮಾಡಿಸಲು ಸಾಧ್ಯವಾಯಿತು. ಅದರಿಂದ ಅಧಿಕಾರಿಗಳು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆಂದರು.

2018ರಲ್ಲಿ ಕಾಂಪ್ಯಾಕ್ಟರ್ ವಾಹನ ಖರೀದಿಯಾದಾಗ ನಗರಸಭೆ ಅಧ್ಯಕ್ಷರಾಗಿದ್ದವರು ಕೆ.ಎಂ.ಸಮಿವುಲ್ಲಾ. ವಾಹನ ಖರೀದಿಸಿದ ಬಳಿಕವೂ ಅದು ವರ್ಷಗಳ ಕಾಲ ಸಾರ್ವಜನಿಕರ ಸೇವೆಗೆ ಲಭ್ಯವಾಗದಿರುವುದು ಆಡಳಿತ ವೈಫಲ್ಯಕ್ಕೆ ಸ್ಪಷ್ಟ ಉದಾಹರಣೆ ಎಂದು ಆರೋಪಿಸಿದರು.

ಸಾರ್ವಜನಿಕರ ತೆರಿಗೆ ಹಣದಿಂದ ಖರೀದಿಸಿದ ವಾಹನವನ್ನು ವರ್ಷಗಟ್ಟಲೆ ಬಳಸದೆ ಮೂಲೆಯಲ್ಲಿ ನಿಲ್ಲಿಸಿದ್ದು ಅಭಿವೃದ್ಧಿಯೇ ಎಂದು ಪ್ರಶ್ನಿಸಿದರು.

ಅಧಿಕಾರದಲ್ಲಿದ್ದಾಗ ಸಂಪನ್ಮೂಲ ಸರಿಯಾಗಿ ಬಳಸದೆ ಸಾರ್ವಜನಿಕರ ತೆರಿಗೆ ಹಣವನ್ನು ಅನವಶ್ಯಕವಾಗಿ ಬಂಡವಾಳ ಹೂಡಿ ನಿಷ್ಕ್ರಿಯಗೊಳಿಸಿದವರು ಅಭಿವೃದ್ಧಿಯ ಹರಿಕಾರ ಎಂದು ಹೇಳಿಕೊಳ್ಳುವುದು ಹಾಸ್ಯಾಸ್ಪದ ಎಂದು ಲೇವಡಿ ಮಾಡಿದರು.

# ವಿದ್ಯಾರ್ಥಿಗಳು ಪ್ರಾಯೋಗಿಕ ಜ್ಞಾನ-ಕೌಶಲ ಕಲಿಯಿರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾರ್ಥಿಗಳು ತಮ್ಮ ವ್ಯಾಸಂಗದ ಅವಧಿಯಲ್ಲಿ ಪಾಠವನ್ನು ಏಕಾಗ್ರತೆಯಿಂದ ಕೇಳಬೇಕು. ಜೊತೆಗೆ ಪ್ರಾಯೋಗಿಕ ಜ್ಞಾನ ಮತ್ತು ಉದ್ಯಮೋನ್ಮುಖ ಕೌಶಲಗಳನ್ನು ಕಲಿಯುವ ಆಸಕ್ತಿ ತೋರಬೇಕು ಎಂದು ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಹೇಳಿದರು.

ಮಲೆನಾಡು ಕಾಲೇಜು ಇಂಜಿನಿಯರಿಂಗ್ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ವಿಭಾಗದ ವತಿಯಿಂದ ಸ್ಕಿಲ್ ಮತ್ತು ಕನ್ಸಲ್ಟೆನ್ಸಿ ಕೇಂದ್ರದಿಂದ 5 ದಿನಗಳ ಕಾಲ ಏರ್ಪಡಿಸಿರುವ ಪ್ರಾಕ್ಟಿಕಲ್ ಅಂಡ್ ಟ್ರೈನಿಂಗ್ ಆನ್ ಎಲೆಕ್ಟ್ರಿಕಲ್ ಸ್ವಿಚ್ ಗಿಯರ್ ವ್ಯವಸ್ಥೆಗಳು, ಪ್ರೊಟೆಕ್ಷನ್ ತಂತ್ರ ಹಾಗೂ ಅಪ್ಲಿಕೇಶನ್, ವಾಸ್ತವಿಕ ಜೀವನದಲ್ಲಿ ಬಳಸುವ ವಿಧಾನಗಳ ಬಗ್ಗೆ ಮಾಹಿತಿ ತಿಳಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು. ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ ಇಂಜಿನಿಯರಿಂಗ್ ವಿಭಾಗವು ಅತಿ



ಪ್ರಮುಖವಾದ ಕ್ಷೇತ್ರವಾಗಿದೆ. ಅದು ಉದ್ಯೋಗದ ಜೊತೆಗೆ ಉದ್ಯೋಗ ನೀಡುವ ವೃತ್ತಿಪರ ಕೋರ್ಸ್ ಆಗಿದೆ ಎಂದು ತಿಳಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮಾಡಿದವರು ನಿರುದ್ಯೋಗಿಗಳಾಗದೆ ಸ್ವಯಂ ಉದ್ಯೋಗದಲ್ಲಿ ಸಹ ತೊಡಗಿಸಿಕೊಳ್ಳಬಹುದು ಎಂದು ತಿಳಿಸಿದರು.

ಪ್ರಧಾನ ಕಾರ್ಯದರ್ಶಿ ಚೌಡಳ್ಳಿ ಜಗದೀಶ್ ಮಾತನಾಡಿ, ವಿದ್ಯಾರ್ಥಿಗಳ ಅನುಕೂಲತೆಗಾಗಿ ಹಲವಾರು ತರಬೇತಿಗಳನ್ನು ನೀಡುವ ಉದ್ದೇಶವನ್ನು ಹೊಂದಿದ್ದು ನುರಿತ ವಿಷಯವಾರು ತಜ್ಞರು ಹಲವಾರು ವಿಷಯಗಳ ಬಗ್ಗೆ ಉತ್ತಮ ಮಾಹಿತಿಯನ್ನು ಇಂತಹ ತರಬೇತಿ ಶಿಬಿರದಿಂದ ನೀಡಲಿದ್ದಾರೆ. ಇದು ನಮ್ಮ ವಿದ್ಯಾರ್ಥಿಗಳಿಗೆ ಸಾಕಷ್ಟು ಪ್ರಯೋಜನವಾಗಲಿದೆ. ಅವರ ಕಲಿಕೆಗೆ ಸಾಕಷ್ಟು ಪ್ರಯೋಜನವಾಗಲಿದೆ. ಇದರ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆಯಬೇಕೆಂದರು. ಉದ್ಯೋಗ ಮಾಡುವ ಜೊತೆಗೆ ಸ್ವಂತ ಉದ್ದಿಮೆಗಳು ಸಹ ಆಗಬಹುದು. ಇಂತಹ ತರಬೇತಿ ಶಿಬಿರವನ್ನು ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗವು ಏರ್ಪಡಿಸಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಅಧ್ಯಯನ ಮತ್ತು ಕಲಿಕೆಗೆ ಸಹಕಾರಿಯಾಗಿದೆ ಎಂದು ತಿಳಿಸಿದರು.

ತರಭೇತಿ ವಿಭಾಗದ ನಿರ್ದೇಶಕ ಡಿ.ವಿ. ಶಿವಾನಂದ್ ಮಾತನಾಡಿ, ವಿದ್ಯಾರ್ಥಿಗಳಿಗೆ ಅಧ್ಯಯನದ ಜೊತೆಗೆ ಕೆಲಸದ ಅನುಭವವು ಇರಬೇಕಾದದ್ದು ಅವಶ್ಯಕತೆ ಇದೆ. ಪಾಠ ಕೇಳುವುದು ಮತ್ತು ಪ್ರಾಕ್ಟಿಕಲ್ ಕೆಲಸಗಳಿಗೆ ನಿರ್ವಹಿಸುವುದು ಅತ್ಯಂತ ಉಪಯೋಗಕಾರಿಯಾಗಲಿದೆ. ಎಲೆಕ್ಟ್ರಿಕಲ್ ಕಂಟ್ರೋಲ್ ಪ್ಯಾನಲ್‌ಗಳ ತಯಾರಿಕೆ, ಡಿಸೈನ್ ಎರೆಕ್ಷನ್ ಮತ್ತು ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ಕ್ಷೇತ್ರದಲ್ಲಿ ಹಲವಾರು ವಿವಿಧ ತರಬೇತಿಯ ನೀಡುವ ಮೂಲಕ ವಿದ್ಯಾರ್ಥಿಗಳಿಗೆ ಕಲಿಸುವ ಕಾರ್ಯವನ್ನು ಮಾಡಲಾಗುತ್ತಿದೆ. ಹೆಚ್ಚಾಗಿ ಸ್ವಯಂ ಉದ್ಯೋಗದ ಅನುಭವವು ಅವರಿಗೆ ಸಿಗಲಿದೆ, ಇಂದ ಅವರ ವೃತ್ತಿ ಜೀವನಕ್ಕೆ ಹೆಚ್ಚಿನ ಅನುಕೂಲತೆಗಳು ಸಿಗಲಿವೆ. ಅಧ್ಯಯನ ಮತ್ತು ತರಬೇತಿಯು ಉತ್ತಮ ಮಾರ್ಗದರ್ಶನದಿಂದ ವಿದ್ಯಾರ್ಥಿಯ ಜೀವನವನ್ನು ಬದಲಾಯಿಸಲಿದೆ ಎಂದರು. ಪ್ರಾಂಶುಪಾಲ ಡಾ. ಎಚ್.ಜೆ.ಅಮರೇಂದ್ರ ಮಾತನಾಡಿ, ನಮ್ಮ ಕಾಲೇಜಿನ ಎಲ್ಲಾ ವಿಭಾಗಗಳು ಸಹ ವಿದ್ಯಾರ್ಥಿಗಳಿಗೆ ಹಲವಾರು ತರಬೇತಿಗಳನ್ನು ನೀಡುವ ಮೂಲಕ ಅವರಿಗೆ ಹೆಚ್ಚಿನ ಜ್ಞಾನ ಸಿಗುವಂತೆ ಮತ್ತು ಮನೋಸ್ಥೈರ್ಯ ಹೆಚ್ಚುವಂತೆ ಹಲವಾರು ತರಬೇತಿಗಳನ್ನು ಏರ್ಪಡಿಸಿ ಜ್ಞಾನ ಅಭಿವೃದ್ಧಿಗೆ ಸಹಕಾರಿ ಮಾಡುತ್ತಿದ್ದೇವೆ ಎಂದರು ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.

ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ ವಿಭಾಗ ಮುಖ್ಯಸ್ಥ ಡಾ. ರಾಜಣ್ಣ, ಖಜಾಂಚಿ ಎಚ್.ಡಿ. ಪಾರ್ಶ್ವನಾಥ್, ಕಾಲೇಜಿನ ಸ್ಕಿಲ್ ಮತ್ತು ಕನ್ಸ್ಲಂಟೆನ್ಸಿ ಸೆಂಟರ್ ವಿಭಾಗದ ಮುಖ್ಯಸ್ಥ ಡಾ. ಎ.ಜೆ. ಕೃಷ್ಣಯ್ಯ, ತರಬೇತಿ ನಿರ್ದೇಶಕ ಎಸ್. ಬಸವೇಶ್ ಶೆಟ್ಟಿ, ಬಿ.ಎಸ್. ರಾಜೇಶ್ವರಿ, ಡಾ. ರಾಘವೇಂದ್ರ ಪ್ರಸಾದ್ ಇತರರಿದ್ದರು.

## ಏ. 10 ರಿಂದ 14ರ ವರೆಗೆ ಸೀರೆ ಮೇಳ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಎಂ.ಜಿ.ರಸ್ತೆಯ ರವೀಂದ್ರ ನಗರದ ರಾಘವೇಂದ್ರ ಮಠದ ಆವರಣದಲ್ಲಿ ಏ.10 ರಿಂದ 14ರ ವರೆಗೆ ಕಂಚಿ ಕಾಮಾಕ್ಷಿ ಸಿಲ್ಕ್ ಸೀರೆ ಮೇಳ ಏರ್ಪಡಿಸಲಾಗಿದೆ ಎಂದು ಮೇಳ ಆಯೋಜಕ ಪ್ರದೀಪ್ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಹಾಸ, ಅರಸೀಕೆರೆ, ಚನ್ನರಾಯಪಟ್ಟಣ, ಶಿವಮೊಗ್ಗಾ ಸೇರಿ ಅನೇಕ ಕಡೆ ಮೇಳ ಆಯೋಜಿಸಿದ್ದು ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮೈಸೂರು ಸಿಲ್ಕ್, ಸಿಮಿ ಕ್ರೇಪ್ ಮೈಸೂರು ಸಿಲ್ಕ್, ಬೆಂಗಳೂರು ಸಿಲ್ಕ್, ಕಾಂಚೀಪುರಂ ಸಿಲ್ಕ್, ಬನಾರಸ್ ಸಿಲ್ಕ್ ಮೊದಲಾದ ಫ್ಯಾನ್ಸಿ ಸೀರೆಗಳು ಒಂದೇ ಕಡೆ ದೊರೆಯಲಿವೆ ಎಂದರು.

ವಿಶೇಷ ಎಂದರೆ 600 ರೂ.ನಿಂದ 25 ಸಾವಿರ ರೂ. ವರೆಗಿನ ಸೀರೆಗಳ ಪೈಕಿ ಒಂದು ತೆಗೆದುಕೊಂಡರೆ ಮತ್ತೊಂದು ಉಚಿತವಾಗಿ ಸಿಗಲಿದೆ. ಗರಿಷ್ಟ 35 ಸಾವಿರ ರೂ. ವರೆಗೆ ಉತ್ಕೃಷ್ಟ ಸೀರೆಗಳು ದೊರೆಯಲಿದ್ದು, ಬೇರೆ ಕಡೆಗಳಿಗಿಂತ ಶೇ.30 ರಿಂದ 40ರಷ್ಟು ಕಡಿಮೆ ದರದಲ್ಲಿ ಸಿಗಲಿವೆ. ಪುರುಷರ ರೇಷ್ಮೆ ಟಿ ಶರ್ಟ್‌ಗಳನ್ನು ಸಹ ಮಾರಾಟ ಮಾಡಲಾಗುತ್ತಿದೆ ಎಂದು ತಿಳಿಸಿದರು.

## ಇತಿಹಾಸದಲ್ಲಿ ಈ ದಿನ

### ಏಪ್ರಿಲ್-09

1865: ಅಮೇರಿಕಾದ ಗೃಹಯುದ್ಧ ಅಂತ್ಯಗೊಳ್ಳಲು ಕಾರಣವಾದ ಅಪೊಮ್ಯಾಟೊಕ್ಸ್ ನ್ಯಾಯಾಲಯದ ಶರಣಾಗತಿ ನಡೆಯಿತು.

1940: ಜರ್ಮನಿ ನಾರ್ವೆ ಮತ್ತು ಡೆನ್ಮಾರ್ಕ್ ಮೇಲೆ ದಾಳಿ ನಡೆಸಿತು (ದ್ವಿತೀಯ ಮಹಾಯುದ್ಧ)

1959: ನಾಸಾ ಸಂಸ್ಥೆಯು ಮೊದಲ ಬಾರಿಗೆ ಆಮರ್ಕುರಿ ಸೆವನ್‌ಟಿ ಅಂತರಿಕ್ಷಯಾತ್ರಿಗಳನ್ನು ಪರಿಚಯಿಸಿತು.

2003: ಬಗ್ದಾದ್ ಪತನ ಇರಾಕ್ ಯುದ್ಧದಲ್ಲಿ ಬಗ್ದಾದ್ ನಗರ ಅಮೇರಿಕಾ ಪಡೆಗಳ ವಶಕ್ಕೆ ಸೇರಿತು.

**ಜನನ**

1893: ರಾಹುಲ್ ಸಂಕೃತ್ಯಾಯನ, ಪ್ರಸಿದ್ಧ ಭಾರತೀಯ ಪಂಡಿತ ಹಾಗೂ ಸಾಹಿತ್ಯಕಾರರು

1929: ಶಂಕರ ದಯಾಳ್ ಶರ್ಮಾ, ಭಾರತದ ಮಾಜಿ ರಾಷ್ಟ್ರಪತಿ

**ನಿಧನ**

1626: ಫ್ರಾನ್ಸಿಸ್ ಬೇಕನ್, ಖ್ಯಾತ ತತ್ವಜ್ಞ ಮತ್ತು ವಿಜ್ಞಾನಿ

2015: ರವಿಶಂಕರ್, ಪ್ರಸಿದ್ಧ ಸೀತಾರ್ ವಾದಕ

# ಮಲ್ಲಿಪಟ್ಟಣದಲ್ಲಿ ನಕಲಿ ಕ್ಲಿನಿಕ್‌ಗೆ ಬೀಗ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ನಕಲಿ ವೈದ್ಯರ ವಿರುದ್ಧ ಸರ್ಕಾರ ಕ್ರಮಕ್ಕೆ ಮುಂದಾದ ಹಿನ್ನೆಲೆಯಲ್ಲಿ ತಾಲೂಕಿನ ಮಲ್ಲಿಪಟ್ಟಣದ ಲಕ್ಷ್ಮಣ್ ಕ್ಲಿನಿಕ್ ಮತ್ತು ಪಟ್ಟಣದ ಜಯಲಕ್ಷ್ಮಿ ಕ್ಲಿನಿಕ್ ಮೇಲೆ ತಾಲೂಕು ಆರೋಗ್ಯಾಧಿಕಾರಿ ದಾಳಿ ನಡೆಸಿ ಬೀಗ ಹಾಕಿಸಿದ್ದಾರೆ.

ಮಲ್ಲಿಪಟ್ಟಣದ ನಕಲಿ ವೈದ್ಯ ಡಾ. ವಿಶ್ವನಾಥ್ ಎಂಬಾತ ಹಲವಾರು ವರ್ಷಗಳಿಂದ ಲಕ್ಷ್ಮಣ್ ಹೆಸರಿನಲ್ಲಿ ಕ್ಲಿನಿಕ್ ತೆರೆದು ಮೆಡಿಕಲ್ ದಂಧೆ ನಡೆಸುತ್ತಿದ್ದು ನಿತ್ಯ ನೂರಾರು ಮಂದಿ ರೋಗಿಗಳಿಗೆ ನಕಲಿ ಔಷಧಿ ನೀಡಿ ವಂಚಿಸುತ್ತಿದ್ದ. ಸರ್ಕಾರ ನಕಲಿ ವೈದ್ಯರಿಂದ ರೋಗಿಗಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿ ಸಾವು ನೋವಿಗೆ ಗುರಿಯಾಗುತ್ತಿದ್ದ ಕಾರಣ ಅಂತಹ ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆದೇಶ ನೀಡಿತ್ತು. ಎಚ್ಚೆತ್ತ ತಾಲೂಕು ಆರೋಗ್ಯಾಧಿಕಾರಿ ಡಾ. ಪುಷ್ಪಲತಾ ಅವರು ಇತ್ತೀಚೆಗೆ ಮಲ್ಲಿಪಟ್ಟಣದ ಲಕ್ಷಣ್ ಕ್ಲಿನಿಕ್ ಮೇಲೆ ದಾಳಿ ನಡೆಸಿ ಬೀಗ ಮುದ್ರೆ ಹಾಕಿದ್ದಾರೆ.

ಸರ್ಕಾರ ನಕಲಿ ವೈದ್ಯರ ವಿರುದ್ಧ ಕ್ರಮ ಜರುಗಿಸುವಂತೆ ಆದೇಶ ನೀಡಿದ ಹಿನ್ನಲೆಯಲ್ಲಿ ಮಲ್ಲಿಪಟ್ಟಣದ ಲಕ್ಷ್ಮಣ್ ಕ್ಲಿನಿಕ್‌ಗೆ ಬೀಗ ಜಡಿದು ನಕಲಿ ವೈದ್ಯ ಡಾ. ವಿಶ್ವನಾಥ್ ವಿರುದ್ಧ ಕ್ರಮ ಜರುಗಿಸಲಾಗಿದೆ ಎಂದರು.

# ನಿಯಮಿತ ಆರೋಗ್ಯ ತಪಾಸಣೆ ಶಿಸ್ತುಬದ್ಧ ಜೀವನಕ್ಕೆ ಸಹಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗ್ರಾಮೀಣ ಭಾಗದ ಜನರು ಸರಿಯಾದ ಸಮಯದಲ್ಲಿ ವೈದ್ಯಕೀಯ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವುದರಿಂದ ಉತ್ತಮ ಆರೋಗ್ಯವನ್ನು ರೂಪಿಸಿಕೊಳ್ಳಬಹುದು ಎಂದು ಮಣಿ ಆಸ್ಪತ್ರೆಯ ಮುಖ್ಯಸ್ಥ ಡಾ. ಜಿ.ಕೆ. ಯತೀಶ್ ಹೇಳಿದರು.

ತಾಲೂಕಿನ ಕೆಲವತ್ತಿ ಗ್ರಾಮದಲ್ಲಿ ಗಿಡ್ಡಮ್ಮ ದೇವಿ ಚಾರಿಟಬಲ್ ಟ್ರಸ್ಟ್, ಪೂರ್ಣಪ್ರಜ್ಞ ಇನ್ಸಿಟ್ಯೂಟ್ ಆಫ್ ಅರೆ ವೈದ್ಯಕೀಯ ವಿಜ್ಞಾನ ಸಂಸ್ಥೆ (ಕಂಚಮಾರನಹಳ್ಳಿ) ಹಾಗೂ ಮಣಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಹೆಚ್ಚಾಗುತ್ತಿರುವುದರಿಂದ ಗಂಭೀರ ಆರೋಗ್ಯ ಸಮಸ್ಯೆಗಳು




ಹೆಚ್ಚುತ್ತಿವೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಅವರು ತಿಳಿಸಿದರು.

ಪ್ರಸುತಿ ಮತ್ತು ಸ್ತ್ರೀರೋಗ ತಜ್ಞೆ ಡಾ. ಬಿ.ಕೆ. ಸೌಮ್ಯಮಣಿ ಮಾತನಾಡಿ, ಜೀವನಶೈಲಿ ಬದಲಾವಣೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಬೀರುತ್ತವೆ. ವಯಸ್ಸಿಗೆ ಅನುಗುಣವಾಗಿ ನಿಯಮಿತ ಪರೀಕ್ಷೆಗಳನ್ನು ಮಾಡಿಸಿಕೊಂಡರೆ ರೋಗಗಳನ್ನು ಮುಂಚಿತವಾಗಿ ತಡೆಗಟ್ಟಬಹುದು ಎಂದು ಹೇಳಿದರು.

ರೋಗ ಬಂದ ನಂತರ ಮಾತ್ರ ವೈದ್ಯರನ್ನು ಸಂಪರ್ಕಿಸುವ ಬದಲು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವುದು ಅಗತ್ಯ. ಈ ಬಾರಿ ವಿಶ್ವ ಆರೋಗ್ಯ ದಿನಾಚರಣೆಯ ಸಂದೇಶವಾದ ಆನಾವೆಲ್ಲರೂ ವಿಜ್ಞಾನದ ಕಡೆಗೆ ಸಾಗೋಣಟಿ ಎಂಬುದನ್ನು ಅಳವಡಿಸಿಕೊಳ್ಳಬೇಕು. ಅಜ್ಞಾನ ಮತ್ತು ಮೂಢನಂಬಿಕೆಗಳಿಂದ ದೂರವಿದ್ದು ಆರೋಗ್ಯದ ಬಗ್ಗೆ ಜಾಗೃತಿ ವಹಿಸಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಸಮಾಜ ಸೇವಕ ಕಂಚಮಾರನಹಳ್ಳಿ ಲಕ್ಷ್ಮಿಕಾಂತ್ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಆರೋಗ್ಯ ಶಿಬಿರಗಳನ್ನು ಹೆಚ್ಚಾಗಿ ಆಯೋಜಿಸುವುದು ಅಗತ್ಯ. ಇದರಿಂದ ಜನರಿಗೆ ಉಚಿತ ತಪಾಸಣೆ ಜೊತೆಗೆ ಆರೋಗ್ಯ ಅರಿವು ಹೆಚ್ಚುತ್ತದೆ ಎಂದು ಹೇಳಿದರು.

ಮಕ್ಕಳ ತಜ್ಞ ಡಾ. ದಿನೇಶ್ ಮಾತನಾಡಿ, ಹಿಂದಿನ ಕಾಲದಲ್ಲಿ ಆರೋಗ್ಯಕರ ಜೀವನಶೈಲಿ ಇತ್ತು. ಆದರೆ ಇಂದಿನ ದಿನಗಳಲ್ಲಿ ನಿರ್ಲಕ್ಷ್ಯದಿಂದ ಅನೇಕ ರೋಗಗಳು ಹೆಚ್ಚುತ್ತಿವೆ. ಜನರು ಆರೋಗ್ಯದ ಬಗ್ಗೆ ಜಾಗೃತಿ ವಹಿಸಿ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣ ಹಾಗೂ ಮೊಬೈಲ್‌ಗಳ ಅತಿಯಾದ ಬಳಕೆಯಿಂದ ಮಾನವ ಸಂಬಂಧಗಳು ಕುಗ್ಗುತ್ತಿವೆ. ಜೊತೆಗೆ ದೈಹಿಕ ಚಟುವಟಿಕೆಗಳ ಕೊರತೆಯಿಂದ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಶಿಬಿರವು ಯಶಸ್ವಿಯಾಗಿ ನಡೆಯಿತು. ಅನೇಕ ಗ್ರಾಮಸ್ಥರು ಭಾಗವಹಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು. ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಕಾರು ಡಿಕ್ಕಿಯಾಗಿ ಬೈಕ್ ಸವಾರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಬೈಕ್ ಓವರ್‌ಟೇಕ್ ಮಾಡಲು ಕಾರು ಜೋರಾಗಿ ಓಡಿಸಿದ ಪರಿಣಾಮ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಅಡಗೂರು ಗೇಟ್ ಸಮೀಪ ನಡೆದಿದೆ.

ಮಂಡ್ಯ ಜಿಲ್ಲೆ ಕಿಕ್ಕೇರಿ ಹೋಬಳಿ ಗುಡ್ಡೆಹೊಸಹಳ್ಳಿ ಗ್ರಾಮದ ಜಿ.ಕೆ.ನಂದೀಶ್ ಮೃತರು. ಬುಧವಾರ ಬೆಳಿಗ್ಗೆ 5ರ ಸಮಯದಲ್ಲಿ ಗ್ರಾಮದಿಂದ ಚನ್ನರಾಯಪಟ್ಟಣಕ್ಕೆ ಬರುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಕಾರು ಚಾಲಕ ಓವರ್‌ಟೇಕ್ ಮಾಡಲು ಜೋರಾಗಿ ಓಡಿಸಿದ್ದರಿಂದ ಬೈಕ್‌ಗೆ ಡಿಕ್ಕಿಯಾಗಿದೆ. ಅಪಘಾತವಾಗುತ್ತಿದ್ದಂತೆ ಕಾರು ಚಾಲಕ ನಿಲ್ಲಿಸದೆ ಪರಾರಿಯಾಗಿದ್ದಾನೆ.

ಡಿಕ್ಕಿಯ ರಭಸಕ್ಕೆ ಬೈಕ್ ಸಮೇತ ರಸ್ತೆಯ ಮೇಲೆ ಬಿದ್ದ ನಂದೀಶ್ ಅವರ ತಲೆ ಹಾಗು ಹೊಟ್ಟೆ ಭಾಗಕ್ಕೆ ಬಲವಾದ ಪೆಟ್ಟು ಬಿದ್ದು ಮೃತಪಟ್ಟಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಿಲ್ಲೆಯ ವಿವಿಧೆಡೆ 7 ಕಿಶೋರ ಕಾರ್ಮಿಕರ ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ವಿವಿಧೆಡೆ ಕಾನೂನು ಬಾಹಿರವಾಗಿ ಕೆಲಸ ಮಾಡಿಕೊಂಡಿದ್ದ 7 ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ. 2026ರ ಜ. 28ರಿಂದ ಮಾ. 27ರ ವರೆಗೆ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ಕಾರ್ಮಿಕ ಇಲಾಖೆಯಿಂದ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು. ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ತಪ್ಪಿತಸ್ಥ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ. ಮಕ್ಕಳನ್ನು ಪೋಷಕರಿಗೆ ಒಪ್ಪಿಸಲಾಗಿದೆ. 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ದಿಮೆಯಲ್ಲಿ ಹಾಗೂ 14 ರಿಂದ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಕೆಲಸದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ. ಇಂತಹ ಮಕ್ಕಳು ಕೆಲಸದಲ್ಲಿ ತೊಡಗಿರುವುದು ಕಂಡು ಬಂದಲ್ಲಿ ಕಾರ್ಮಿಕ ಸಹಾಯವಾಣಿ 155214, ಮಕ್ಕಳ ಸಹಾಯವಾಣಿ 1098, ಹತ್ತಿರದ ಪೊಲೀಸ್ ಠಾಣೆ ಹಾಗೂ ಆಯಾ ತಾಲ್ಲೂಕು ಹಿರಿಯ/ಕಾರ್ಮಿಕ ನಿರೀಕ್ಷಕರ ಕಚೇರಿಗೆ ದೂರು ನೀಡಬಹುದಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಕೆ.ಎನ್.ಯಮುನಾ ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248